# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 595 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶರವಣ ಟಿ.ಎ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23.12.2022 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪಂಚಮಸಾಲಿ ಲಿಂಗಾಯಿತ ಸಮುದಾಯಕ್ಕೆ 2ಎ ಮೀಸಲಾತಿ ನೀಡುವ ಬಗ್ಗೆ ವರದಿ ನೀಡಲು ಅಧ್ಯಯನ ಮಾಡುತ್ತಿರುವ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಕಾರ್ಯಗಳೇನು; (ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ 1995 ಕಲಂ:9(1) ರನ್ವಯ ಆಯೋಗದ ಪ್ರಕಾರ್ಯಗಳು ಈ ಕೆಳಕಂಡಂತಿದೆ.<br>I. ನಾಗರಿಕರ ಯಾವುದೇ ವರ್ಗವನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಬೇಕೆಂದು ಬಂದ ಕೋರಿಕೆಗಳನ್ನು ಪರಿಶೀಲಿಸುವುದು ಮತ್ತು ಯಾವುದೇ ಹಿಂದುಳಿದ ವರ್ಗವನ್ನು ಅಂಥ ಪಟ್ಟಿಯಲ್ಲಿ ಹೆಚ್ಚಾಗಿ ಸೇರಿಸಲಾಗಿದೆ ಎಂದು ಅಥವಾ ಸೇರಿಸಲಾಗಿಲ್ಲವೆಂದು ಬಂದ ದೂರುಗಳ ವಿಚಾರಣೆ ಮಾಡುವುದು ಮತ್ತು ಸರ್ಕಾರಕ್ಕೆ ಅದು ಸಮುಚಿತವೆಂದು ಭಾವಿಸುವಂಥ ಸಲಹೆಯನ್ನು ನೀಡುವುದು;<br>II. ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಬಗ್ಗೆ ಸರ್ವೆ ಮಾಡುವುದು.<br>III. ಹಿಂದುಳಿದ ವರ್ಗಗಳಿಗಾಗಿ ಇರುವ ಅನೇಕ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ಮೇಲ್ವಿಚಾರಣೆ ಮಾಡುವುದು. |
| ಆ | ಆಯೋಗದ ಮತ್ತು ಸರ್ಕಾರದ ನಡುವೆ ನಡೆದಿರುವ ಪ್ರಸ್ತಾಪದ ವಿವರಗಳೇನು; (ಮಾಹಿತಿ ಒದಗಿಸುವುದು) | ಕರ್ನಾಟಕ ರಾಜ್ಯದ ಲಿಂಗಾಯಿತ ಪಂಚಮಸಾಲಿ ಜನಾಂಗದವರು ತಮ್ಮ ಸಮಾಜವು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ಔದ್ಯೋಗಿಕವಾಗಿ ಹಿಂದುಳಿದಿದೆ ಮತ್ತು ಸಮಾಜದ ಕಡುಬಡವರಿಗೆ ತೊಂದರೆಯಾಗಿರುವುದರಿಂದ ತಮ್ಮ ಸಮಾಜವನ್ನು ಹಿಂದುಳಿದ ವರ್ಗ 2ಎ ಮೀಸಲಾತಿಗೆ ಒಳಪಡಿಸಲು ಮನವಿ ಮಾಡಿರುತ್ತಾರೆ. ಕಾರಣ, ಈ ಬಗ್ಗೆ ಸಮಗ್ರ ಅಧ್ಯಯನ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಹಿಂದಿನ ಮಾನ್ಯ ಮುಖ್ಯಮಂತ್ರಿಯವರಾದ ಶ್ರೀ ಬಿ.ಎಸ್.ಯಡಿಯೂರಪ್ಪನವರು ಆಯೋಗದ |

| | | |
|---|---|---|
| | | ಅಧ್ಯಕ್ಷರಿಗೆ ದಿನಾಂಕ: 05.02.2021ರ ಟಿಪ್ಪಣಿಯಲ್ಲಿ ಕೋರಿರುತ್ತಾರೆ.<br><br>ಸರ್ಕಾರದ ಪತ್ರ ಸಂಖ್ಯೆ: ಹಿಂವಕ 39 ಬಿಸಿಎ 2021 ದಿನಾಂಕ:12.08.2021ರಲ್ಲಿ ಲಿಂಗಾಯಿತ/ ವೀರಶೈವ ಪಂಚಮಸಾಲಿ ಜನಾಂಗದ ಬಗ್ಗೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಅಧ್ಯಯನ ಕೈಗೊಂಡು ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. |
| ಇ) | ಸ ವರಿ ಆಯೋಗವು ವರದಿಯನ್ನು ( ಬಾವಾಗ ಸಲ್ಲಿಸಲಿದೆ. (ಮಾಹಿತಿ ನ ೀಡುವುದು) | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಪಂಚಮಸಾಲಿ ಲಿಂಗಾಯಿತ ಸಮುದಾಯಕ್ಕೆ ಸಂಬಂದಿಸಿದಂತೆ, ಜಿಲ್ಲೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಣೆ ಹಾಗೂ ಅಧ್ಯಯನ ಕಾರ್ಯದ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಈ ಹಂತದಲ್ಲಿ ವರದಿ ಸಲ್ಲಿಸುವ ಅವಧಿಯನ್ನು ನಿರ್ದಿಷ್ಟಪಡಿಸಲು ಸಾಧ್ಯವಾಗುವುದಿಲ್ಲ. |

ಸಂಖ್ಯೆ: ಹಿಂವಕ 256 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು